# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 295 | Pages. 2 | Date: 16-10-2025, THURSDAY RNI NO: KARKAN/2024/89601 Kannada Daily

ಸಂಪುಟ : 01 - ಸಂಚಿಕೆ : 295 - ಪುಟಗಳು : 2 16-10-2025 ಗುರುವಾರ Ph: 8762954248 ದರ : ₹1


# ನಾಡಿಗೆ ಸುಭಿಕ್ಷೆ ಲಭಿಸಲಿ: ಸಿಎಂ ಪ್ರಾರ್ಥನೆ

## ಹಾಸನಾಂಬ ದರ್ಶನ ಪಡೆದ ಸಿದ್ದರಾಮಯ್ಯ | ಅಚ್ಚುಕಟ್ಟು ವ್ಯವಸ್ಥೆಗೆ ಬಹುಪರಾಕ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಶಕ್ತಿ ದೇವತೆ ಹಾಸನಾಂಬ ದರ್ಶನಕ್ಕೆ ಬುಧವಾರವು ಸಹ ಸಹಸ್ರಾರು ಭಕ್ತರು ಬಂದಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ಅನೇಕ ಗಣ್ಯರು ಭೇಟಿ ನೀಡಿದರು.

ಸಿಎಂ ಸಿದ್ದರಾಮಯ್ಯ, ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಹಾಗೂ ಸಿನಿಮಾ ತಾರೆಯರು ಸೇರಿ ವಿವಿಧ ಕ್ಷೇತ್ರದ ಗಣ್ಯರು ಹಾಗೂ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವಿಯ ದರ್ಶನ ಪಡೆದರು.

ಸಿಎಂ ಸಿದ್ದರಾಮಯ್ಯ ಹಾಸನಾಂಬ ತಾಯಿಯ ದರ್ಶನ ಪಡೆದ ನಂತರ ಸುಭೀಕ್ಷೆಗಾಗಿ ಪ್ರಾರ್ಥಿಸಿರುವುದಾಗಿ ಹೇಳಿದರು. ರಾಜ್ಯದ ಜನರಿಗೆ ಒಳ್ಳೆಯದು ಮಾಡಲಿ ಆಯಸ್ಸು, ಆರೋಗ್ಯ ಕೊಡಲಿ ಸಮಾಜದಲ್ಲಿ ಎಲ್ಲರೂ ಮನುಷ್ಯರಂತೆ ಜೀವಿಸಲಿ. ಮನುಷ್ಯ-ಮನುಷ್ಯನನ್ನು ಪ್ರೀತಿಸಲಿ. ಕುವೆಂಪು ಅವರ ಸರ್ವಜನಾಂಗದ ಶಾಂತಿಯ ತೋಟ ಎಂಬ ಭಾವನೆ ಎಲ್ಲರಿಗೂ ಮೂಡಲಿ, ನನಗೆ, ಸರ್ಕಾರಕ್ಕೆ, ಮಂತ್ರಿಗಳಿಗೆ, ಶಾಸಕರಿಗೆ ಎಲ್ಲ ಜನರಿಗೂ ಒಳ್ಳೆಯದಾಗಲಿ ಎಂದು ಪ್ರಾರ್ಥಿಸಿರುವುದಾಗಿ ಹೇಳಿದರು.

ಕೃಷ್ಣ ಬೈರೇಗೌಡ ಜಿಲ್ಲಾ ಉಸ್ತುವಾರಿ ಸಚಿವರಾದ ನಂತರ ಭಕ್ತರಿಗೆ ಸುಗಮ ದರ್ಶನದ ವ್ಯವಸ್ಥೆ ಆಗಿದೆ. ಜಿಲ್ಲಾಡಳಿತ, ಜನಪ್ರತಿನಿಧಿಗಳು, ಪಕ್ಷದ ಕಾರ್ಯಕರ್ತರು, ಬೇರೆ ಪಕ್ಷದ ಕಾರ್ಯಕರ್ತರು ಎಲ್ಲರು ಸಹಕಾರ ನೀಡಿದ್ದಾರೆ ಎಲ್ಲರಿಗೂ ಧನ್ಯವಾದ ಎಂದರು.



### ಹೆಚ್ಚುವರಿ ಸಮಯ: ಮಾನಸಿಕವಾಗಿ ಸಿದ್ಧರಾಗಿ

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಮಾತನಾಡಿ, ಶುಕ್ರವಾರದಿಂದ ಸಾರ್ವಜನಿಕ ದರ್ಶನ ಆರಂಭವಾಗಿದ್ದು, 5 ದಿನದಲ್ಲಿ 8,84503 ಜನ ದರ್ಶನ ಪಡೆದಿದ್ದಾರೆ. ಪ್ರಾರಂಭದ ದಿನಗಳಲ್ಲಿ ಒಂದು ಎರಡು ಗಂಟೆಗಳಲ್ಲಿ ಧರ್ಮ ದರ್ಶನ ಆಗುತ್ತಿತ್ತು. ಈಗ 4 ರಿಂದ 5 ಗಂಟೆ ಸಮಯ ತೆಗೆದುಕೊಳ್ಳುತ್ತಿದೆ ಬರುವವರು ಇದಕ್ಕೆ ಮಾನಸಿಕವಾಗಿ ಸಿದ್ದರಾಗಿ ಬರಬೇಕು. ಕಳೆದ ಬಾರಿ ದರ್ಶನಕ್ಕೆ 15 ರಿಂದ 20 ಗಂಟೆ ತೆಗೆದುಕೊಳ್ಳುತ್ತಿತ್ತು. ಈ ಬಾರಿ 3-4 ಗಂಟೆಯಲ್ಲಿ ದರ್ಶನ ಆಗುತ್ತಿದೆ ಎಂದು ಹೇಳಿದರು.

ಕೃಷಿಕರು, ರೈತರು, ಕೆಲಸ ಕಾರ್ಮಿಕರು ಹೆಚ್ಚಾಗಿ ದರ್ಶನಕ್ಕೆ ಬರುತ್ತಿದ್ದಾರೆ. ಭಕ್ತರಲ್ಲಿ ಶೇ.70 ರಿಂದ 80ರಷ್ಟು ಜನ ಮಹಿಳೆಯರು ಇದ್ದಾರೆ. ಸರ್ಕಾರದ ಶಕ್ತಿ ಯೋಜನೆ ಉಪಯೋಗಿಸಿಕೊಂಡು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ದೇಗುಲಕ್ಕೆ ಆಗಮಿಸುತ್ತಿದ್ದಾರೆ ಎಂದರು.

ಜಿಲ್ಲೆಯ ಎಲ್ಲ ಜನ ಪ್ರತಿನಿಧಿಗಳು ಸಹಕಾರ ನೀಡಿದ್ದಾರೆ. ಜನರಿಂದ ಉತ್ತಮ ಪ್ರತಿಕ್ರಿಯೆ ಬಂದಿದೆ. ಆಡಳಿತ ವ್ಯವಸ್ಥೆ ಉತ್ತಮ ರೀತಿಯಲ್ಲಿ ಕೆಲಸ ಮಾಡಿದೆ. ಸಿಎಂ ಆಗಮನದಿಂದ ಜನರಿಗೆ ಇನ್ನಷ್ಟು ಸ್ಫೂರ್ತಿ ಬಂದಿದೆ ಎಂದರು.

## ಚುನಾವಣೆಗೆ ಸರ್ಕಾರ ಸನ್ನದ್ಧ: ಮುಖ್ಯಮಂತ್ರಿ



ಹಾಸನ: ಸ್ಥಳೀಯ ಸಂಸ್ಥೆ ಚುನಾವಣೆಗೆ ನಾವು ಸರ್ವ ರೀತಿಯಲ್ಲೂ ಸನ್ನದ್ಧರಾಗಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೂವನಹಳ್ಳಿ ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಸ್ಥಳೀಯ ಸಂಸ್ಥೆ ಚುನಾವಣೆ ವಿಚಾರ ಕೋರ್ಟ್‌ನಲ್ಲಿದೆ. ನ್ಯಾಯಾಲಯ ಯಾವಾಗ ಹೇಳುತ್ತದೆಯೋ ಆಗ ಚುನಾವಣೆ ಮಾಡುತ್ತೇವೆ. ಬೆಂಗಳೂರು ಕಾರ್ಪೊರೇಷನ್ ಸೇರಿ ಜಿಲ್ಲಾ, ತಾಲ್ಲೂಕು ಪಂಚಾಯಿತಿ ಚುನಾವಣೆ ಆಗಬೇಕಿದೆ. ಒಂದೊಂದಾಗಿ ಚುನಾವಣೆ ನಡೆಸಬೇಕಿದೆ. ಪ್ರಜಾಪ್ರಭುತ್ವ ಚುನಾವಣೆಗಳಿಂದಲೇ ಗಟ್ಟಿಯಾಗುತ್ತದೆ. ನಾವು ಅದಕ್ಕೆ ಸಿದ್ಧರಾಗಿದ್ದೇವೆ ಎಂದರು.

ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡಲಾಗುತ್ತಿದೆಯೆಂದು ಆರೋಪಿಸುತ್ತಿರುವ ಬಿಜೆಪಿ-ಜೆಡಿಎಸ್‌ನವರು ತಮ್ಮ ಆಡಳಿತಾವಧಿಯಲ್ಲಿ ಎಷ್ಟು ಕೊಟ್ಟಿದ್ದರು.

ಅನುದಾನ ಹಂಚಿಕೆಯಲ್ಲಿ ಪ್ರತಿಪಕ್ಷಗಳ ಶಾಸಕರಿಗೆ ಅನ್ಯಾಯ ಮಾಡಲಾಗಿದೆಯೆಂದು ನ್ಯಾಯಾಲಯ ಮೆಟ್ಟಿಲೇರಿದ್ದಾರೆ. ಅಲ್ಲೇ ತೀರ್ಮಾನವಾಗಲಿ ಬಿಡಿ ಎಂದರು.

ಶಾಸಕರಿಗೆ ಅನುದಾನ ಎಷ್ಟು ಕೊಡಬೇಕು ಅಷ್ಟು ಕೊಟ್ಟಿದ್ದೇವೆ. ಏನೂ ಕೊಟ್ಟಿಲ್ಲವೆಂದು ಸುಳ್ಳು ಆರೋಪ ಮಾಡಬಾರದು. ಸಮ್ಮಿಶ್ರ ಸರ್ಕಾರದಲ್ಲಿ ಹಾಗೂ ಬಿಜೆಪಿ ಹಿಂದೆ ಅಧಿಕಾರದಲ್ಲಿದ್ದಾಗ ಎಷ್ಟು ಅನುದಾನ ಕೊಟ್ಟಿದ್ದಾರೆ.

ಅವರು ಇದ್ದಾಗ ಅನುದಾನ ಕೊಡದೆ ಈಗ ಸುಮ್ಮನೆ ಆರೋಪ ಮಾಡುತ್ತಿದ್ದಾರೆ.

ಅಧಿಕಾರದಲ್ಲಿ ಇದ್ದಾಗ ಏನೂ ಮಾಡದೆ ಈಗ ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.

ಸೋಮವಾರ ಆಯೋಜಿಸಿದ್ದ ಸಚಿವರ ಜೊತೆಗಿನ ಔತಣ ಕೂಟಕ್ಕೂ ರಾಜಕೀಯಕ್ಕೂ ಸಂಬಂಧ ಇಲ್ಲ. ನಾವು ಯಾವಾಗಲೂ ಸೇರುತ್ತೇವೆ. ಪಕ್ಷದ ವಿಚಾರದ ಬಗ್ಗೆ ಚರ್ಚೆ ಮಾಡುತ್ತೇವೆ.

ಆಗಾಗ ಊಟಕ್ಕೆ ಸೇರುತ್ತೇವೆ. ಅದಕ್ಕೂ ಸಚಿವ ಸಂಪುಟ ವಿಸ್ತರಣೆಗೂ ಸಂಬಂಧವಿಲ್ಲ. ಸುಖಾ ಸುಮ್ಮನೆ ಯಾವ್ಯಾವುದಕ್ಕೂ ಹೋಲಿಕೆ ಮಾಡಬೇಡಿ ಎಂದರು.

ಸಚಿವ ಸಂಪುಟ ಪುನಾರಚಣೆ ಕುರಿತು ಪ್ರತಿಕ್ರಿಯಿಸಿ, ಹೈಕಮಾಂಡ್ ಈಗ ಬಿಹಾರ ಚುನಾವಣೆ ಬಗ್ಗೆ ಗಮನ ಹರಿಸಿದೆ. ಅದು ಮುಗಿದ ಮೇಲೆ ನೋಡೋಣ, ಹೈ ಕಮಾಂಡ್ ಏನು ಹೇಳುತ್ತದೆಯೋ ಹಾಗೆಯೇ ಮಾಡೋಣ. ಸದ್ಯ ನವೆಂಬರ್ ಕ್ರಾಂತಿಯೂ ಇಲ್ಲ ಯಾವ ಭ್ರಾಂತಿಯೂ ಇಲ್ಲವೆಂದು ಹಾಸ್ಯ ಚಟಾಕಿ ಹಾರಿಸಿದರು.

### ಶಿಷ್ಟಾಚಾರ ಪಾಲಿಸಿದ ಸಿಎಂ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ವಾಹನದಲ್ಲೇ ದೇವಸ್ಥಾನಕ್ಕೆ ಬರಬಹುದಿತ್ತಾದರೂ ಜಿಲ್ಲಾಡಳಿತ ನಿಯೋಜಿಸಿದ್ದ ಶಿಷ್ಟಾಚಾರ ವಾಹನದಲ್ಲೇ ಬಂದು ಸರಳತೆ ಪ್ರದರ್ಶಿಸಿದರು.

ಪ್ರವಾಸಿ ಮಂದಿರದಿಂದ ಜಿಲ್ಲಾಡಳಿತ ನಿಯೋಜಿಸಿದ್ದ ವಾಹನಗಳಲ್ಲೇ ಸಚಿವ ರಾಮಲಿಂಗಾರೆಡ್ಡಿ, ಸಂಸದ ಶ್ರೇಯಸ್ ಪಟೇಲ್, ಶಾಸಕ ಕೆ.ಎಂ. ಶಿವಲಿಂಗೇಗೌಡ ಹಾಗು ಪಕ್ಷದ ಮುಖಂಡರೊಂದಿಗೆ ಆಗಮಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಆತ್ಮೀಯವಾಗಿ ಮುಖ್ಯಮಂತ್ರಿ ಅವರನ್ನು ಸ್ವಾಗತಿಸಿದರು.

## ತಮಿಳುನಾಡು ಸರ್ಕಾರದಿಂದ ವರದಿ

ಸರ್ಕಾರಿ ಶಾಲೆ ಅಥವಾ ಜಾಗದಲ್ಲಿ ಯಾವ ಚಟುವಟಿಕೆ ಮಾಡಬಾರದು. ಆರ್‌ಎಸ್‌ಎಸ್ ಮಾತ್ರವಲ್ಲ ಯಾವ ಸಂಘಟನೆಗಳಿಗೂ ಅವಕಾಶ ನೀಡಬಾರದು. ಆರ್‌ಎಸ್ ಎಸ್ ಚಟುವಟಿಕೆಗೆ ನಿರ್ಬಂಧ ಹೇರುವ ಸಂಬಂಧ ಚರ್ಚೆ ನಡೆದಿದೆ. ತಮಿಳುನಾಡಿನಲ್ಲಿ ಈ ಬಗ್ಗೆ ನಿಯಮ ಮಾಡಿದ್ದಾರೆ. ಅದನ್ನು ಪರಾಮರ್ಶಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಎರಡನೇ ಬಾರಿಗೆ ಹಾಸನಾಂಬ ದರ್ಶನಕ್ಕೆ ಬಂದಿದ್ದೇನೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಹಾಗು ಶಾಸಕ ಕೆ.ಎಂ. ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್ ಮತ್ತು ಅಧಿಕಾರಿಗಳು ಜೊತೆಗೂಡಿ ಉತ್ತಮ ಸಿದ್ಧತೆ ಮಾಡಿಕೊಂಡಿದ್ದಾರೆಂದು ಮೆಚ್ಚುಗೆ ಸೂಚಿಸಿದರು.

ಮುರಾಯಿ ಸಚಿವ ರಾಮಲಿಂಗಾ ರೆಡ್ಡಿ, ಶಾಸಕ ಕೆ.ಎಂ. ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್, ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ, ಮಾಜಿ ಸಚಿವ ಬಿ. ಶಿವರಾಮ್, ದಕ್ಷಿಣ ವಲಯ ಡಿಐಜಿ ಬೋರಲಿಂಗಯ್ಯ, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಮತ್ತಿತರರಿದ್ದರು.

## ಬಾನು ಮುಷ್ತಾಕ್‌ರಿಂದ ದೇವಿ ದರ್ಶನ



ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಹಾಸನಾಂಬ ದೇವಿಯ ದರ್ಶನ ಪಡೆದರು.

ಜಿಲ್ಲಾಡಳಿತದ ಶಿಷ್ಟಾಚಾರದ ವಾಹನದಲ್ಲಿ ದೇಗುಲಕ್ಕೆ ಆಗಮಿಸಿ ದರ್ಶನ ಪಡೆದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ನನ್ನ ಮೊದಲ ದರ್ಶನವಲ್ಲ. ನಾನು ಹಾಸನದವರೇ, ನಮ್ಮ ಮನೆ ದೇವಾಲಯದ ಮುಂದಿನ ಬೀದಿಯಲ್ಲಿದೆ. ಚಿಕ್ಕಂದಿನಿಂದಲೂ ತಾಯಿಯ ಕೈ ಹಿಡಿದು ಹಾಸನಾಂಬೆಯ ದರ್ಶನಕ್ಕೆ ಬರುತ್ತಿದ್ದೆ. ಆಗ ಯಾರಿಗೂ ಗೊತ್ತಾಗುತ್ತಿರಲಿಲ್ಲ, ಆದರೆ ಈಗ ಎಲ್ಲರೂ ಗುರುತಿಸುತ್ತಿದ್ದಾರೆ ಎಂದರು.

ಇದು ಭಾವೈಕ್ಯತೆಯ ಸಂಕೇತ. ಬಹಳ ಹಿಂದಿನಿಂದಲೂ ಮುಸ್ಲಿಂ ಸಮುದಾಯದವರು ಸಹ ಹಾಸನಾಂಬೆಯ ಜಾತ್ರೆಯಲ್ಲಿ ಪಾಲ್ಗೊಂಡು ದೇವಿಯನ್ನು ಗೌರವಿಸುತ್ತಿದ್ದರು. ಪೂರ್ವಿಕರು ಹಸನ್ ಬಿ, ಹುಸೇನ್ ಬಿ ಎಂದು ನಂಬುತ್ತಿದ್ದರು. ಮುಸ್ಲಿಂ ಹೆಣ್ಣು ಮಕ್ಕಳು ದೇವಾಲಯಕ್ಕೆ ಬಂದು ದೇವಿಯ ಕುರಿತು ನಮಗೆಲ್ಲ ಹೇಳಿಕೊಡುತ್ತಿದ್ದರು. ಇದು ಹಾಸನದ ಸಾಮಾಜಿಕ ಸಾಮರಸ್ಯದ ಜೀವಂತ ಉದಾಹರಣೆ ಎಂದು ಹೇಳಿದರು.

ಹಾಸನಾಂಬ ಜಾತ್ರೆ ನಮ್ಮೂರ ಹಬ್ಬ. ಎಲ್ಲರೂ ಒಟ್ಟಾಗಿ ಉತ್ಸಾಹದಿಂದ ಭಾಗವಹಿಸುತ್ತಾರೆ. ಇದು ಪ್ರೀತಿ, ಸ್ನೇಹ, ಸಹಬಾಳ್ವೆ ಮತ್ತು ಶಾಂತಿಯ ತಾಣ ಎಂದರು.

ಹಿಂದಿನ ಕಾಲದಲ್ಲಿ ಮುಸ್ಲಿಂ ಸಮುದಾಯದವರು ಜಾತ್ರೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದು, ಸಕ್ಕರೆ ಊದುಕಡ್ಡಿ (ಶುಭಾಶಯದ ಸಂಕೇತ) ತಂದು ದೇವಾಲಯದ ಮುಂದೆ ಊದುವ ಪರಂಪರೆ ಇತ್ತು ಎಂಬುದನ್ನೂ ನೆನಪಿಸಿದರು. ಮಧ್ಯದಲ್ಲಿ ಸ್ವಲ್ಪ ಕಡಿಮೆಯಾಗಿತ್ತು. ಈಗ ಮತ್ತೆ ಎಲ್ಲರೂ ಸೇರಿ ಬರುತಿದ್ದಾರೆ ಎಂಬುದು ಸಂತೋಷದ ಸಂಗತಿ ಎಂದರು.

## ಅಗತ್ಯ ಬಿದ್ದರೆ ಹೆಚ್ಚುವರಿ ಅನುದಾನ

ಹಾಸನಾಂಬ ಜಾತ್ರೆಗೆ ಹೆಚ್ಚುವರಿ ಅನುದಾನವನ್ನು ರಾಜ್ಯ ಬಜೆಟ್‌ನಲ್ಲಿ ಘೋಷಿಸುತ್ತೀರಾ ಎನ್ನುವ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾಡಳಿತದ ಜೊತೆ ಚರ್ಚಿಸುತ್ತೇನೆ. ಅಗತ್ಯಬಿದ್ದರೆ ಅನುದಾನ, ಹಣಕಾಸಿನ ನೆರವು ನೀಡಲಾಗುವುದು ಎಂದರು. ಹಿರಿಯ ನಟಿ ಜಯಮಾಲ, ಶೃತಿ, ಮಾಳವಿಕಾ ಅವಿನಾಶ್ ಹಾಗೂ ಹಿರಿಯ ನಟ ಶಶಿಕುಮಾರ್ ದೇವಾಲಯಕ್ಕೆ ಆಗಮಿಸಿ ದೇವಿ ದರ್ಶನ ಪಡೆದರು. ದರ್ಶನದ ನಂತರ ಮಾತನಾಡಿದ ಅವರು, ಜಿಲ್ಲಾಡಳಿತದ ವತಿಯಿಂದ ಮಾಡಿದ ವ್ಯವಸ್ಥೆ ಶ್ಲಾಘನೀಯವಾಗಿದೆ. ಭಕ್ತರ ಸುರಕ್ಷತೆ ಮತ್ತು ಸೌಲಭ್ಯಕ್ಕಾಗಿ ಕೈಗೊಂಡ ಕ್ರಮಗಳು ಶಿಸ್ತಿನಿಂದ ನಡೆದಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



## ಕೊಟ್ಟ ಸಾಲ ಕೇಳಿದ್ದಕ್ಕೆ ಕೊಂದು ಚಿನ್ನಾಭರಣ ದೋಚಿದರು

### ತಾಯಿ-ಮಗನಿಂದ ಹೀನ ಕೃತ್ಯ | ಸಾಕ್ಷ್ಯ ನಾಶಕ್ಕೆ ಯತ್ನಿಸಿ ಸಿಕ್ಕಿಬಿದ್ದರು

ಚನ್ನರಾಯಪಟ್ಟಣ: ವೃದ್ಧೆಯೊಬ್ಬರು ಕೊಟ್ಟಿದ್ದ ಸಾಲದ ಹಣವನ್ನು ವಾಪಸ್ ಕೇಳಲೆಂದು ಮನೆಗೆ ಹೋದಾಗ ಕಬ್ಬಿಣ ಆಯುಧದಿಂದ ಹಲ್ಲೆ ಮಾಡಿ ಹತ್ಯೆ ಮಾಡಿದ್ದು ಮಾತ್ರವಲ್ಲದೆ ಸಾಕ್ಷ್ಯ ನಾಶಕ್ಕಾಗಿ ಮೃತದೇಹವನ್ನು ಹೇಮಾವತಿ ನದಿಗೆ ಎಸೆದಿದ್ದಾರೆ.

ತಾಲ್ಲೂಕಿನ ದೊಡ್ಡಗನ್ನಿ ಗ್ರಾಮದ ರಾಜಮ್ಮ (72) ಮೃತರು. ಮಲ್ಲವನಘಟ್ಟ ಸಮೀಪದ ಹೇಮಾವತಿ ನಾಲೆಯಲ್ಲಿ ಅ. 12ರಂದು ಶವ ಪತ್ತೆಯಾಗಿತ್ತು. ಸಾಸಲುಪುರ ಗ್ರಾಮದ ರಸ್ತೆ ಮನೆಯ ರಾಜಲಕ್ಷ್ಮಿ ಹಾಗೂ ಆಕೆಯ ಪುತ್ರ ಹೇಮಂತ್ ಬಂಧಿತರು.

ಅ.10ರ ಮಧ್ಯಾಹ್ನ 1 ಗಂಟೆ ಸಮಯದಲ್ಲಿ ಪುತ್ರ ದೊರೆಸ್ವಾಮಿ ರಾಜಮ್ಮ ಅವರನ್ನು ಪಟ್ಟಣದ ನವೋದಯ ಬಸ್ ನಿಲ್ದಾಣದ ಬಳಿ ಬಿಟ್ಟು ಊರಿಗೆ ಹೋಗುವಂತೆ ಹೇಳಿದ್ದ. ಆದರೆ ರಾಜಮ್ಮ ಮನೆಗೆ ಹೋಗದೆ ಶ್ರೀನಿವಾಸಪುರ ಸಕ್ಕರೆ ಕಾರ್ಖಾನೆ ಸಮೀಪ ಬಸ್ ಇಳಿದು ರಾಜಲಕ್ಷ್ಮಿ ಎಂಬುವರ ಮನೆಗೆ ತೆರಳಿದ್ದರು. ಸಂಜೆಯಾದರೂ ಆ ದಿನ ಮನೆಗೆ ಬಂದಿರಲಿಲ್ಲ. ತಾಯಿ ಮನೆಗೆ ಬಾರದೆ ಇದ್ದರಿಂದ ಎಲ್ಲಾ ಕಡೆ ಹುಡುಕಿದ್ದ ದೊರೆಸ್ವಾಮಿ ನಗರ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಿದ್ದರು.

ಅ. 12 ರಂದು ಮಲ್ಲವನಘಟ್ಟ ಹೇಮಾವತಿ ನಾಲೆಯಲ್ಲಿ ಮಹಿಳೆಯೊಬ್ಬರ ಶವ ತೇಲಿ ಬರುತ್ತಿದೆಯೆಂದು ಸುದ್ದಿ ತಿಳಿದು ದೊರೆಸ್ವಾಮಿ ಹಾಗೂ ಸಂಬಂಧಿಕರು ತೆರಳಿ ಪರಿಶೀಲಿಸಿದಾಗ ಮೃತರು ರಾಜಮ್ಮ ಎನ್ನುವುದು ಗೊತ್ತಾಗಿದೆ. ಶವವನ್ನು ನೀರಿನಿಂದ ಹೊರ ತೆಗೆದು ನೋಡಿದಾಗ ರಾಜಮ್ಮ ಅವರ ತಲೆಯ ಎಡಭಾಗದಲ್ಲಿ ಗಾಯವಾದಂತೆ ಕಂಡುಬಂದಿದೆ. ಕಣ್ಣು, ಮೂಗಿನ ಭಾಗಕ್ಕೆ ಜಲಚರ ಪ್ರಾಣಿಗಳು ಕಚ್ಚಿರಬಹುದು. ರಾಜಮ್ಮ ಅವರು ನೀರಿಗಿಳಿದಾಗ ಕಾಲು ಜಾರಿ ಬಿದ್ದಿರಬಹುದು ಅಥವಾ ಯಾರಾದರೂ ತಳ್ಳಿರಬಹುದೆಂದು ಯುಡಿಆರ್ ಪ್ರಕರಣ ದಾಖಲಿಸಲಾಗಿತ್ತು. ಮರಣೋತ್ತರ ಪರೀಕ್ಷೆಗಾಗಿ ಮೃತದೇಹವನ್ನು ಹಿಮ್ಸ್‌ಗೆ ರವಾನಿಸಲಾಗಿತ್ತು.

#### ಬೆಚ್ಚಿ ಬೀಳಿಸಿದ ಮರಣೋತ್ತರ ವರದಿ:

ಮರಣೋತ್ತರ ಪರೀಕ್ಷೆಯಲ್ಲಿ ರಾಜಮ್ಮ ಅವರ ಮೇಲೆ ಕಬ್ಬಿಣದ ಬಲವಾದ ಆಯುಧದಿಂದ ಹೊಡೆದು ಸಾಯಿಸಲಾಗಿದೆ ಎಂಬುದು ಸಾಬೀತಾಗಿದೆ. ವರದಿ ಆಧರಿಸಿ ಕುಟುಂಬಸ್ಥರ ವಿಚಾರಣೆ ನಡೆಸಿದಾಗ ರಾಜಮ್ಮ ಅವರು ಯಾವಾಗಲೂ ಚಿನ್ನದ ಮಾಂಗಲ್ಯ ಸರ, ಕಿವಿಯೋಲೆ ಹಾಗು ಮೂಗುನತ್ತು ಧರಿಸುತ್ತಿದ್ದರು. ನಾಲೆಯಲ್ಲಿ ಸಿಕ್ಕ ಶವ ನೋಡಿದಾಗ ಮೂಗುನತ್ತು ಹೊರತುಪಡಿಸಿ ಉಳಿದ ಆಭರಣ ಇರಲಿಲ್ಲ. ಯಾರೋ ಚಿನ್ನಾಭರಣ ದೋಚಿ ಹೊಡೆದು ಸಾಯಿಸಿದ್ದಾರೆಂದು ಅನುಮಾನ ವ್ಯಕ್ತಪಡಿಸಿದರು. ಮರಣೋತ್ತರ ವರದಿ ಹಾಗೂ ಕುಟುಂಬಸ್ಥರ ಹೇಳಿಕೆ ಆಧರಿಸಿ ನಗರ ಠಾಣೆ ಪಿಎಸ್‌ಐ ರತ್ನಕುಮಾರ್ ಅವರು ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.


ಮೃತ ರಾಜಮ್ಮ ಅವರು ಸಾಸಲಪುರ ಗ್ರಾಮದ ರಾಜಲಕ್ಷ್ಮಿ ಎಂಬುವವರಿಗೆ ಸಾಲ ಕೊಟ್ಟಿದ್ದರು. ಅದನ್ನು ಕೇಳುವುದಕ್ಕಾಗಿ ಯಾವಾಗಲೂ ಅವರ ಮನೆಗೆ ಹೋಗುತ್ತಿದ್ದರು. ಅ. 10 ರಂದು ಸಹ ಅಲ್ಲಿಗೆ ತೆರಳಿದ್ದರು. ಆ ಬಳಿಕ ನಾಪತ್ತೆಯಾಗಿದ್ದರು. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ನ. 2ರಂದು ಹಲ್ಮಿಡಿಯಲ್ಲಿ ಕವಿಗೋಷ್ಠಿ-ಗೀತ ಗಾಯನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲಾ ಮಟ್ಟದ ಕವಿಗೋಷ್ಠಿ ಹಾಗೂ ಗೀತ ಗಾಯನ ಸ್ಪರ್ಧೆಯನ್ನು ನ. 2ರ ಭಾನುವಾರ ತಾಲ್ಲೂಕಿನ ಹಲ್ಮಿಡಿ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಬರಹಗಾರರ ಸಂಘದ ಜಿಲ್ಲಾಧ್ಯಕ್ಷ ಡಿ. ಸುಂದರೇಶ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಬರಹಗಾರರ ಸಂಘವು ಐದು ವರ್ಷಗಳಿಂದ ಕವಿಗೋಷ್ಠಿ ಆಯೋಜನೆ ಮೂಲಕ ಬರಹಗಾರರು, ಕವಿ, ಕಲಾವಿದರು, ಸಾಹಿತ್ಯಾಸಕ್ತರನ್ನು ಒಂದೇ ವೇದಿಕೆಗೆ ಕರೆತರಲಾಗುತ್ತಿದೆ. ಪ್ರತಿವರ್ಷ ಹೊಸ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವುದು ನಮ್ಮ ಉದ್ದೇಶವೆ ಎಂದರು.



ರಾಜ್ಯ ಬರಹಗಾರರ ಸಂಘದ ಜಿಲ್ಲಾ ಗೌರವಾಧ್ಯಕ್ಷ ವೆಂಕಟೇಶ್ ಮಾತನಾಡಿ, ಪ್ರತಿವರ್ಷ ರಾಜ್ಯ ಬರಹಗಾರರ ಸಂಘದಿಂದ ಒಂದೊಂದು ಪ್ರಸಿದ್ಧ ಸ್ಥಳಗಳಲ್ಲಿ ಕನ್ನಡ ಮತ್ತು ವಿವಿಧ ಕ್ಷೇತ್ರದ ಕಲಾವಿದರು, ಸಮಾಜ ಸೇವಕರನ್ನು ಗೌರವಿಸುತ್ತಿದ್ದೆವು. ಆದರೆ ಈ ಬಾರಿ ಕನ್ನಡಕ್ಕೆ ಪಥಮ ಶಿಲಾ ಶಾಸನ ಕೊಟ್ಟ ಹಲ್ಮಿಡಿ ಗ್ರಾಮವನ್ನು ಆಯ್ಕೆ ಮಾಡಲಾಗಿದೆ. ಕಾರ್ಯಕ್ರಮದಲ್ಲಿ ಸ್ಥಳೀಯ ಕವಿಗಳು ಮತ್ತು ಕಲಾವಿದರಿಗೆ ಆದ್ಯತೆ ನೀಡಲಾಗುವುದು. ಪ್ರಮುಖವಾಗಿ ಕವಿಗಾಯನ, ಕಲಾಕುಂಚ, ಸಂಗೀತ ಕಾರ್ಯಕ್ರಮ, ಸಾಹಿತ್ಯ ಚರ್ಚೆ ಮತ್ತು ಕವಿತಾ ವಿಮರ್ಶೆ ಒಂದೇ ವೇದಿಕೆಯಲ್ಲಿ ನಡೆಯಲಿದೆ. 100ಕ್ಕೂ ಹೆಚ್ಚು ಕವಿಗಳು, ಸಾಹಿತ್ಯಾಸಕ್ತರು, ವಿದ್ಯಾರ್ಥಿಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬರಹಗಾರ ಸಂಘದ ಚನ್ನೇಗೌಡ, ಜಿಲ್ಲಾ ಕಾರ್ಯದರ್ಶಿ ದಿಬ್ಬೂರು ರಮೇಶ್, ಡಾ.ರಾಜ್‌ಕುಮಾರ್ ಸಂಘದ ಅಧ್ಯಕ್ಷ ತೀರ್ಥಂಕರ್ ಇದ್ದರು.

## ದುಶ್ಚಟಕ್ಕೆ ದಾಸರಾಗಬೇಡಿ: ಬಸವ ರಾಜೇಂದ್ರ ಶ್ರೀ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ಚಿಕ್ಕ ವಯಸ್ಸಿನಲ್ಲೇ ಕೆಲವರು ದುಶ್ಚಟಗಳಿಗೆ ದಾಸರಾಗಿ ಆರೋಗ್ಯ ಹಾಳು ಮಾಡಿಕೊಳ್ಳುವುದಲ್ಲದೆ ಕುಟುಂಬಕ್ಕೆ ಹೊರೆಯಾಗುತ್ತಿದ್ದಾರೆ ಎಂದು ಕೆಸವತ್ತೂರು ವಿರಕ್ತ ಮಠದ ಶ್ರೀ ಬಸವ ರಾಜೇಂದ್ರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ರಾಮನಾಥಪುರದ ಖಾಸಗಿ ಕಲ್ಯಾಣ ಮಂಟಪದಲ್ಲಿ ಧರ್ಮಸ್ಥಳ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿರುವ ಮದ್ಯವರ್ಜನ ಶಿಬಿರದ ಸಾನ್ನಿಧ್ಯ ವಹಿಸಿ ಆರ್ಶಿವಚನ ನೀಡಿದ ಶ್ರೀಗಳು, ಸಂಸಾರದ ಬದುಕು ಕಟ್ಟಿಕೊಳ್ಳಲು ದುಶ್ಚಟಗಳನ್ನು ದೂರ ಮಾಡಿ ಗೌರವಯುತವಾಗಿ ಬದುಕಬೇಕೆಂದು ಕಿವಿಮಾತು ಹೇಳಿದರು.




ಮುಖಂಡರಾದ ನರಸಿಂಹಮೂರ್ತಿ, ಲೊಕೇಶ್, ವಿರೂಪಾಕ್ಷ, ಕಾಳಬೋಯಿ, ಶ್ರೀನಿವಾಸ್ ಇತರರಿದ್ದರು.

## ದಮ್ಮನಿಂಗಲ ಗ್ರಾಮದಲ್ಲಿ ದೇವಾಲಯ ಲೋಕಾರ್ಪಣೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಶ್ರವಣಬೆಳಗೊಳ ಹೋಬಳಿ ದಮ್ಮನಿಂಗಲ ಗ್ರಾಮದಲ್ಲಿ ನಿರ್ಮಿಸಿದ ಶಿಲಾಮಯ ಅಮೃತ ಲಿಂಗೇಶ್ವರಸ್ವಾಮಿ ಮತ್ತು ಕಾಲಭೈರವೇಶ್ವರರ ಪುನರ್ ಜೀರ್ಣೋದ್ಧಾರಗೊಂಡ ದೇವಾಲಯಗಳ ಲೋಕಾರ್ಪಣೆ, ದೇವರಮೂರ್ತಿ ಪ್ರತಿಷ್ಠಾಪನೆ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ನೆರವೇರಿಸಲಾಯಿತು.

ಮೂರು ದಿನ ಜರುಗಿದ ಧಾರ್ಮಿಕ ಮಹೋತ್ಸವದಲ್ಲಿ ಗಂಗೆ ಪೂಜೆಯೊಂದಿಗೆ ಕಳಸ ಹೊತ್ತ ಮಹಿಳೆಯರು, ವಿವಿಧ ಮಂಗಲ ವಾದ್ಯಗಳೊಂದಿಗೆ ಗ್ರಾಮ ದೇವತೆಗಳಾದ ವೀರಭದ್ರೇಶ್ವರ, ಲಕ್ಷ್ಮೀದೇವಿ, ಹೊಂಗೇಲಕ್ಷ್ಮಿ, ದೊಡ್ಡ ತರಳಮ್ಮ ಕನ್ನಂಬಾಡಿಯಮ್ಮ, ಹರಿ ಯಾಲದಮ್ಮ ಹೊನ್ನಾಂಬಿಕೆ, ದೇವರನ್ನು ಆಹ್ವಾನಿಸಿ ಪ್ರತಿಷ್ಠಾಪಿಸಲಾಯಿತು. ಮುಂಜಾನೆ ಬ್ರಾಹ್ಮಿ ಮುಹೂರ್ತದಲ್ಲಿ ಪುನರ್ ಪ್ರಾಣ ಪ್ರತಿಷ್ಠಾಪನೆಯ ಧಾರ್ಮಿಕ ವಿಧಿ ವಿಧಾನ ನೆರವೇರಿಸಿ, ಪೂರ್ಣಾಹುತಿಯೊಂದಿಗೆ ಮಹಾಮಂಗಳಾರತಿ ಮಾಡಲಾಯಿತು.

ಶಾಸಕ ಸಿ.ಎನ್.ಬಾಲಕೃಷ್ಣ ಮಾತನಾಡಿ, ದೇವಾಲಯ ನಿರ್ಮಾಣಕ್ಕೆ ಅರ್ಧ ಎಕರೆ ಸ್ಥಳವನ್ನು ನೀಡಿರುವ ಗಂಗಾಧರ್ ಕುಟುಂಬದವರನ್ನು ಪ್ರಶಂಸಿದರು. ದೇವಾಲಯದ ಒಳ ಭಾಗದಲ್ಲಿ ಕಾಂಕ್ರಿಟ್ ಹಾಕಿಸಿ, 10 ಲಕ್ಷ ರೂ. ಅನುದಾನದಲ್ಲಿ ಸಭಾಂಗಣ ನಿರ್ಮಿಸಲಾಗುವುದು ಎಂದರು. ಶಾಸಕರು ದಾನಿಗಳನ್ನು ಸನ್ಮಾನಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಡಿ.ಜೆ. ರಾಮಕೃಷ್ಣ ದೇವಾಲಯದ ಉಸ್ತುವಾರಿ ದೇವರಾಜು ಮಾತನಾಡಿ, ದಾನಿಗಳನ್ನು ಸ್ಮರಿಸಿ ಅಭಿನಂದಿಸಿದರು. ಶಾಸಕ ಸಿ.ಎನ್. ಬಾಲಕೃಷ್ಣ ನವಗ್ರಹ ಮಂದಿರ ನಾಗಬನವನ್ನು ಉದ್ಘಾಟಿಸಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ, ಮುಖಂಡರಾದ ಚಿದಾನಂದ್, ದೇವರಾಜೇಗೌಡ, ಕೃಷ್ಣೇಗೌಡ, ಎ.ಆರ್. ಶಿವರಾಜ್ ಮಾತನಾಡಿದರು. ಪ್ರಮುಖರಾದ ಚಿಕ್ಕಬಿಳ್ತಿ ಪ್ರವೀಣ್, ಬಿಜೆಪಿ ಮುಖಂಡ ರವಿ ದಮ್ಮನಿಂಗಲ, ಬಸವಣ್ಣ, ಶ್ರೀನಿವಾಸ್, ಶೇಖರ್, ಅನಂತ್, ರುದ್ರೇಶಣ್ಣ, ರುದ್ರಣ್ಣ ಇತರರಿದ್ದರು.

# ತೃತೀಯ ಲಿಂಗಿಗಳ ಸಮೀಕ್ಷೆ: ಕರ್ನಾಟಕವೇ ಮೊದಲು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ದೇಶದ ಯಾವ ರಾಜ್ಯದಲ್ಲೂ ತೃತೀಯ ಲಿಂಗಿಗಳಿಗೆ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆಯನ್ನು ಮಾಡುವ ನಿರ್ಧಾರವನ್ನು ಮಾಡಿಲ್ಲ. ನಮ್ಮ ರಾಜ್ಯದಲ್ಲೇ ಮೊದಲ ಬಾರಿಗೆ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪದ್ಮಾವತಿ ಹೇಳಿದರು.



ಹಾಸನ ವೈದ್ಯಕೀಯ ವಿಜ್ಞಾನಗಳ ಆಸ್ಪತ್ರೆಯಲ್ಲಿ ನಡೆದ ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಯ ಸ್ಥಳಕ್ಕೆ ಭೇಟಿ ಮಾಡಿ ತೃತೀಯ ಲಿಂಗಿಗಳನ್ನು ಮಾತನಾಡಿಸಿದ ಅವರು, ರಾಜ್ಯದಲ್ಲಿ ಎಷ್ಟು ತೃತೀಯ ಲಿಂಗಿಗಳು ಇದ್ದಾರೆ ಎನ್ನುವ ಅಂಕಿ ಅಂಶಗಳು ಗೊತ್ತಾದರೆ ನಿಮಗೆ ಒಂದಷ್ಟು ಸರ್ಕಾರದ ಅನುದಾನವನ್ನು ಬಿಡುಗಡೆ ಮಾಡಿ ಕೆಲಸಗಳನ್ನು ನೀಡಲು ಅನುಕೂಲವಾಗುತ್ತದೆ. ನಿಮ್ಮಲ್ಲಿ ಕೆಲವರು ಭಿಕ್ಷಾಟನೆ ಮಾಡುವುದನ್ನು ಸಹ ತಪ್ಪಿಸಬಹುದಲ್ಲದೆ, ಸ್ವಯಂ ಉದ್ಯೋಗಿಗಳಾಗಲು ಅನುಕೂಲವಾಗುತ್ತದೆ. ಹಾಗಾಗಿ ಎಲ್ಲರೂ ಕಡ್ಡಾಯವಾಗಿ ಈ ಸಮೀಕ್ಷೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ನೀವುಗಳು ಈಗಾಲೇ ಕುಟುಂಬದಿಂದ ದೂರವಿದ್ದು, ಮೊದಲೇ ನೊಂದವರಾಗಿದ್ದೀರಿ, ಸಮಾಜದಲ್ಲಿಯೂ ಕೂಡ ನಿಮಗೆ ತಾರತಮ್ಯ ಮಾಡುತ್ತಾರೆ. ಈ ಎಲ್ಲಾ ನೋವನ್ನು ಅನುಭವಿಸುವ ನಿಮ್ಮನ್ನು ನಮ್ಮ ಸರ್ಕಾರ ಗುರುತಿಸುತ್ತಿದೆ. ನಿಮ್ಮಲ್ಲಿ ಕೆಲವರು ಮಾತ್ರ ವಿದ್ಯಾವಂತರು ಮತ್ತೆ ಕೆಲವರು ಭಿಕ್ಷಾಟನೆ ಮಾಡುವವರು ಇದ್ದಾರೆ. ಹಾಗಾಗಿ ಎಲ್ಲಾ ರೀತಿಯಲ್ಲೂ ನಿಮಗೆ ಅನುಕೂಲವಾಗಬೇಕು ಎಂಬುದಕ್ಕೆ ಸರ್ಕಾರ ಈ ನಿರ್ಧಾರ ಕೈಗೊಂಡಿದೆ ಎಂದು ತಿಳಿಸಿದರು.

ದಸರಾ ಇನ್ನಿತರ ಕಾರ್ಯಕ್ರಮಗಳಿರುವುದರಿಂದ ಅನೇಕರು ಬೆಳಗ್ಗೆಯಿಂದ ರಾತ್ರಿ ಮಧ್ಯರಾತ್ರಿವರೆಗೂ ಕೆಲಸ ಮಾಡುತ್ತಾರೆ.

ಈ ಕಾರಣದಿಂದ ಸಮೀಕ್ಷೆಯಲ್ಲಿ ಭಾಗವಹಿಸುವುದು ಈ ಭಾಗಗಳಲ್ಲಿ ಕಡಿಮೆಯಾಗಿದೆ ಎಂದು ಭಾವಿಸುತ್ತೇನೆ ಎಂದರು.

ಸಾಮಾಜಿಕವಾಗಿ ಶೈಕ್ಷಣಿಕವಾಗಿ ಎಲ್ಲಾ ರೀತಿಯ ಸೌಲಭ್ಯಗಳು ನಿಮಗೆ ದೊರಕಬೇಕು ನೀವು ಸ್ವಾವಲಂಬಿಗಳಾಗಬೇಕು ಎನ್ನುವ ದೃಷ್ಟಿಯಿಂದ ಸರ್ಕಾರ ಈ ಸಮೀಕ್ಷೆಯನ್ನು ಮಾಡುತ್ತಿದೆ. ನಿಮ್ಮ ಜೀವನಕ್ಕೆ ಆಧಾರವಾಗಿ ಸರ್ಕಾರ ಇಂದು ನಿಂತುಕೊಂಡಿದೆ. ಹಾಗಾಗಿ ಎಲ್ಲರೂ ಸಮೀಕ್ಷೆಯಲ್ಲಿ ಭಾಗವಹಿಸಿ ಎಂದರು.

ಹಾಸನ ಜಿಲ್ಲೆಯಲ್ಲಿ 400 ಜನರಲ್ಲಿ ಕೇವಲ ನೂರು ಜನರಷ್ಟೇ ಸಮೀಕ್ಷೆಯಾಗಿದೆ. ಇದು ಬಹಳ ಕಡಿಮೆಯಾಗಿದೆ. ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತರನ್ನು ಉಪಯೋಗಿಸಿಕೊಂಡು ಹೆಚ್ಚಿನ ಪ್ರಚಾರ ನೀಡಬೇಕು ಎಂದು ತಿಳಿಸಿದರು.

# ರಾಷ್ಟ್ರೀಯ ಹಿತಾಸಕ್ತಿ ಕಾಪಾಡಲು ಆರ್‌ಎಸ್‌ಎಸ್ ಇರಬೇಕು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರಾಜ್ಯ, ದೇಶ ಉಳಿಯಬೇಕಾದರೆ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಅಸ್ತಿತ್ವದಲ್ಲಿ ಇರಬೇಕು ಎಂದು ಮಾಜಿ ಸಚಿವ ಗೋಪಾಲಯ್ಯ ಹೇಳಿದರು.

ಮಂಗಳವಾರ ಹಾಸನಾಂಬ ದೇವಿ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರ್‌ಎಸ್‌ಎಸ್ ನಿಷೇಧಿಸಬೇಕೆಂಬುದು ಸಮಂಜಸವಲ್ಲ. ನಮಗೆ ನಮ್ಮ ತಂದೆ-ತಾಯಿ ಜನ್ಮ ನೀಡಿರುವುದು ಇಲ್ಲಯೇ, ನಾವೆಲ್ಲ ಈ ರಾಜ್ಯದಲ್ಲೇ ಹುಟ್ಟಿ ಬೆಳೆದಿದ್ದೇವೆ. ಹೀಗಾಗಿ ಇಲ್ಲಿಯೇ ಆರ್‌ಎಸ್‌ಎಸ್ ಕಾರ್ಯ ಚಟುವಟಿಕೆ ನಡೆಸಬೇಕಾಗುತ್ತದೆ. ಯಾರೇ ಆಗಲಿ ನಿಷೇಧ ಹೇರುವಂತಹ ಯಾವುದೇ ಕಠಣ ಕ್ರಮ ತೆಗೆದುಕೊಳ್ಳಬಾರದು ಎಂದು ಒತ್ತಾಯಿಸಿದರು.

ಕುಟಂಬ ಸಮೇತರಾಗಿ ಆಗಮಿಸಿ ಹಾಸನಾಂಬ ಮತ್ತು ಸಿದ್ದೇಶ್ವರಸ್ವಾಮಿ ದರ್ಶನ ಪಡೆದುಕೊಂಡಿದ್ದೇನೆ. ದೇವರ ಮೇಲೆ ನಂಬಿಕೆ ಇಟ್ಟಿರುವ ಪ್ರತಿಯೊಬ್ಬರು ದೇವಿಯ ದರ್ಶನ ಪಡೆದುಕೊಳ್ಳಬೇಕು. ಪ್ರತಿವರ್ಷ ದರ್ಶನಕ್ಕೆ ಬರುವ ಭಕ್ತರ ಸಂಖ್ಯೆ ಹೆಚ್ಚುತ್ತಿದೆ. ಒಂದು ದಿನದಲ್ಲಿ ಹಾಸನಾಂಬ ದೇವಿಯ ದರ್ಶನ ಪಡೆಯುವವರ ಸಂಖ್ಯೆ ಒಂದು ಲಕ್ಷ ದಾಟಿದೆ. ರಾಜ್ಯ ಮಾತ್ರವಲ್ಲದೇ ಹೊರರಾಜ್ಯ, ವಿದೇಶಗಳಿಂದ ಆಗಮಿಸುತ್ತಿದ್ದಾರೆ ಎಂದರು.



ದೇವಿ ದರ್ಶನ ಪಡೆದು ಬೇಡಿಕೊಂಡ ಕೋರಿಗೆ ಈಡೇರುತ್ತದೆ ಎಂಬುದು ಪ್ರತಿಯೊಬ್ಬರ ನಂಬಿಕೆ. ನನಗೂ ಉತ್ತಮ ರೀತಿಯಲ್ಲಿ ಪೂಜೆ ಸಲ್ಲಿಸಿ, ದರ್ಶನ ಪಡೆದುಕೊಳ್ಳಲು ಅವಕಾಶ ದೊರೆಯಿತು. ಹಲವು ವರ್ಷಗಳಿಂದ ಆಗಮಿಸಿ ದೇವಿಯ ದರ್ಶನ ಪಡೆಯುತ್ತಿದ್ದೇನೆ. ರಾಜ್ಯದಲ್ಲಿ ಉತ್ತಮ, ಮಳೆ ಬೆಳೆಯಾಗಲಿ, ಜನರ ಶ್ರೇಯೋಭಿವೃದ್ಧಿಯಾಗಲಿ ಎಂದು ಬೇಡಿಕೊಂಡಿದ್ದೇನೆ ಎಂದು ತಿಳಿಸಿದರು.

# ಶ್ರೀಮಂತಿಕೆಗಿಂತ ಆರೋಗ್ಯ ಮುಖ್ಯ: ಸಿಮೆಂಟ್ ಮಂಜು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಆರೋಗ್ಯವೆ ಶ್ರೀಮಂತಿಕೆಯಾಗಿದ್ದು, ಆರೋಗ್ಯ ಮತ್ತು ಶಿಕ್ಷಣಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದರು.



ಕದಾಳು ಗ್ರಾಮದಲ್ಲಿ 65 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುತ್ತಿರುವ ನೂತನ ಆಯುಷ್ಮಾನ್ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ವಸತಿ ನಿಲಯ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಎಷ್ಟೇ ಶ್ರೀಮಂತಿಕೆ ಇದ್ದರೂ ಆರೋಗ್ಯ ಏರುಪೇರಾದ ಸಂದರ್ಭದಲ್ಲಿ ಆರೋಗ್ಯಕ್ಕಾಗಿ ವಿಧಿಯಿಲ್ಲದೆ ಸಂಗ್ರಹಿಸಿದ ಹಣವನ್ನು ಆಸ್ಪತ್ರೆಗೆ ಚೆಲ್ಲಬೇಕು. ಅದರಿಂದ ಶ್ರೀಮಂತಿಕೆ ಶೂನ್ಯವಾಗುತ್ತದೆ. ಪ್ರತಿ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರತಿಯೊಬ್ಬರಿಗೂ ಮನೆ ಬಾಗಿಲಲ್ಲಿ ಆರೋಗ್ಯ ಸೇವೆ ದೊರಕಬೇಕು ಎಂಬುದು ಎಲ್ಲರ ಮಹದಾಸೆ ಎಂದರು.

ಪ್ರತಿಯೊಬ್ಬರೂ ಆರೋಗ್ಯವಂತರಾಗಿ ತಪ್ಪದೇ ಶಿಕ್ಷಣ ಪಡೆಯುವುದರಿಂದ ಸುಗಮ ಜೀವನ ಸಾಗಿಸಲು ಸಾಧ್ಯವಾಗುತ್ತದೆ. ಇತ್ತೀಚೆಗೆ ಯುವಜನಾಂಗ ಹಲವು ದುಶ್ಚಟಗಳಿಗೀಡಾಗಿ ತಮ್ಮ ಸುಂದರ ಬಾಳನ್ನು ಹಾಳು ಮಾಡಿಕೊಂಡು ಕುಟುಂಬಕ್ಕೆ ಹೊರೆಯಾಗಿದ್ದಾರೆ. ಹೊರಗೆ ತಯಾರಿಸಿದ ಆಹಾರ ಸೇವಿಸದೆ, ಮನೆಯಲ್ಲಿ ತಯಾರಿಸಿದ ಆಹಾರ ಬಳಸಿಕೊಂಡು, ದುಶ್ಚಟಗಳಿಂದ ದೂರವಾಗಿ ದುಡಿಮೆಗೆ ತಕ್ಕ ಫಲ ಪಡೆದು ಆರೋಗ್ಯಕರ ಜೀವನ ಮಾಡಬೇಕು. ಈಗ ನಿರ್ಮಾಣ ಮಾಡುವ ಕಟ್ಟಡದ ನೆಲ ಅಂತಸ್ತಿನಲ್ಲಿ ಆಸ್ಪತ್ರೆ ಮತ್ತು ಮೊದಲ ಅಂತಸ್ತಿನಲ್ಲಿ ವೈದ್ಯರ ನಿವಾಸಕ್ಕೆ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ. ಇಲ್ಲಿ ಸೇವೆ ಸಲ್ಲಿಸುವ ವೈದ್ಯರು ಆಸ್ಪತ್ರೆಗೆ ಹೊಂದಿಕೊಂಡಿರುವ ಕಟ್ಟಡದಲ್ಲೆ ವಾಸ ಮಾಡುವುದರಿಂದ ರೋಗಿಗಳಿಗೆ ಸದಾ ಸಂಪರ್ಕಕ್ಕೆ ಸಿಲುಕುತ್ತಾರೆ. ಜನಸಾಮಾನ್ಯರು ಸಾವದಾನ ಮತ್ತು ಸಮಾಧಾನದಿಂದ ವೈದ್ಯರ ಸಹಕಾರ ಪಡೆಯಬೇಕು ಎಂದರು. ಕದಾಳು ಗ್ರಾಮ ಪಂಚಾಯಿತಿ ಅಧ್ಯಕ್ಷ ತಿಮ್ಮೇಗೌಡ, ಸದಸ್ಯರಾದ ಸುಧಾ ನಾಗರಾಜ್, ಸ್ಮಿತಾ ಕುಮಾರ್, ಪರಮೇಶ್, ಸೋಮಶೇಖರ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ನಿಸಾರ್ ಫಾತಿಮ, ಕದಾಳು ರಾಜಪ್ಪಗೌಡ, ಲೋಕೇಶ್ ಇತರರಿದ್ದರು.

# ಆರ್‌ಎಸ್‌ಎಸ್ ಶಕ್ತಿ ಕುಗ್ಗಿಸಲು ಯಾರಿಂದಲೂ ಸಾಧ್ಯವಿಲ್ಲ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಆರ್‌ಎಸ್‌ಎಸ್ ಸಂಘಟನೆ ಇಲ್ಲದಿದ್ದರೆ ದೇಶದ ಚರಿತ್ರೆಯೇ ಬೇರೆ ಆಗುತ್ತಿತ್ತು. ಹಿಂದು ದೇಶ ರಕ್ಷಣೆಗೆ ರಾಷ್ಟ್ರೀಯ ಸ್ವಯಂ ಸೇವಕ ತಂಡ ಸದಾ ಮುಂಚೂಣಿಯಲ್ಲಿ ಇರಲಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ತಿಳಿಸಿದರು.

ಹಾಸನಾಂಬ ದೇವಿ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ನರಿಯ ಕೂಗು ಗಿರಿಗೆ ಮುಟ್ಟಲಾರದ ವಿಚಾರ. ಯಾರು ಎಷ್ಟೇ ಕಿರುಚಿದರೂ ಗಿರಿ ಕಳಚಿ ಬೀಳುವುದಿಲ್ಲ. ಅದೇ ರೀತಿ ಆರ್‌ಎಸ್‌ಎಸ್ ಶಕ್ತಿ ಎಂಬುದನ್ನು ಕಾಂಗ್ರೆಸ್‌ನವರು ಅರ್ಥ ಮಾಡಿಕೊಳ್ಳಬೇಕೆಂದು ಹೇಳಿದರು.

ಈ ಹಿಂದೆ ದೇಶ ಯಾವ ಕಾರಣಕ್ಕೆ ವಿಭಜನೆ ಆಗಿತ್ತು ಎಂಬುದು ಎಲ್ಲರಿಗೂ ಗೊತ್ತಿದೆ. ಕಾಂಗ್ರೆಸ್ ಸರ್ಕಾರದ ಇಂತಹ ನಡವಳಿಕೆಗಳಿಂದ ಮುಂದೆ ಆ ಸ್ಥಿತಿಬರಬಹುದು. ಅದನ್ನು ತಡೆಯುವ ಶಕ್ತಿ ಇರುವುದು ಆರ್‌ಎಸ್‌ಎಸ್ ಮತ್ತು ಬಿಜೆಪಿಗೆ ಮಾತ್ರ. ಕಾಂಗ್ರೆಸ್‌ನ ಯಾವ ಶಕ್ತಿ ಜನರ ಮಧ್ಯೆ ಕೆಲಸ ಮಾಡುತ್ತಿಲ್ಲ. ಕೇವಲ ಅಧಿಕಾರಕ್ಕಾಗಿ ಹವಣಿಸುತ್ತಿದ್ದಾರೆ ಎಂದರು.

ಇತ್ತೀಚೆಗೆ ಕಾರ್ಯಕ್ರಮ ಒಂದರಲ್ಲಿ ಆರ್‌ಎಸ್‌ಎಸ್ ಸಂಘಟನೆಯ ಭಾಗವಾದ ಕರಿ ಟೋಪಿ ಧರಿಸಿ ಭಾಗವಹಿಸಿದ್ದ ಶಾಸಕ ಮುನಿರತ್ನ ಅವರ ಬಗ್ಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಲಘುವಾಗಿ ಮಾತನಾಡಿರುವುದು ಅವರ ಕೆಟ್ಟ ನಡವಳಿಕೆ ತೋರಿಸುತ್ತದೆ ಎಂದರು.



ಪದ್ಧತಿಯಂತೆ ವರ್ಷಕ್ಕೊಮ್ಮೆ ನಡೆಯುವ ಹಾಸನಾಂಬ ದರ್ಶನೋತ್ಸವಕ್ಕೆ ಕುಟುಂಬ ಸಮೇತನಾಗಿ ಬಂದಿದ್ದೇನೆ. ಪ್ರತಿಯೊಬ್ಬರೂ ಹಾಸನಾಂಬೆ ಆಶೀರ್ವದಿಸಲಿ. ಜಿಲ್ಲಾಡಳಿತ ಉತ್ತಮವಾಗಿ ದರ್ಶನ ವ್ಯವಸ್ಥೆಯನ್ನು ಮಾಡಿದೆ. ರಾಜ್ಯದಲ್ಲಿ ಹಿಂದುಳಿದ, ದಲಿತ ಹಾಗೂ ಎಲ್ಲಾ ಸಮಾಜದವರು ಸುಭಿಕ್ಷವಾಗಿ ನೆಮ್ಮದಿಯಿಂದ ಬಾಳಲಿ ಎಂದು ಕೇಳಿಕೊಂಡಿದ್ದೇನೆ ಎಂದರು.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್‌ಶೆಟ್ಟಿ, ಎಸ್.ಸಿ.ಮೋರ್ಚಾ ಜಿಲ್ಲಾಧ್ಯಕ್ಷ ಮಂಜು ಮತ್ತಿತರರು ಹಾಜರಿದ್ದರು.

# ರಾಜ್ಯ ಮಟ್ಟದ ಕ್ರೀಡಾಕೂಟಕ್ಕೆ ಮೊಹಮ್ಮದ್ ಸಯೀದ್



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಅಚೀವರ್ಸ್ ಪ್ರಜ್ಞಾ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ ಮೊಹಮ್ಮದ್ ಸಯೀದ್ ರಾಜ್ಯ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಈ ತಿಂಗಳ 11 ಮತ್ತು 12ರಂದು ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಬಾಲಕರ ಅಥ್ಲೆಟಿಕ್ಸ್ ವಿಭಾಗದ 100 ಮೀ. ಓಟದ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಅರ್ಹತೆ ಗಳಿಸಿದ್ದಾರೆ.

200 ಮೀ. ಓಟದ ಸ್ಪರ್ಧೆಯಲ್ಲಿ ಆರಿಫ್ ತೃತೀಯ ಸ್ಥಾನ ಪಡೆದರೆ, 4100 ಮೀ. ರಿಲೇ ಓಟದಲ್ಲಿ ನಿಖಿಲ್, ಮೊಹಮ್ಮದ್ ಸಯೀದ್, ಯುವರಾಜು ಹಾಗೂ ಆರಿಫ್ ತಂಡ ದ್ವಿತೀಯ ಸ್ಥಾನ ಪಡೆದಿದೆ. ವಿದ್ಯಾರ್ಥಿಗಳ ಸಾಧನೆಗೆ ಕಾಲೇಜಿನ ಆಡಳಿತ ಮಂಡಳಿ, ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗ ಅಭಿನಂದನೆ ಸಲ್ಲಿಸಿದೆ.

# ಗೂಡ್ಸ್ ಆಟೋಗಳ ನಿಲುಗಡೆ ಸಾರ್ವಜನಿಕರ ವಿರೋಧ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಪಟ್ಟಣದ ಮುಖ್ಯ ರಸ್ತೆಯಲ್ಲಿರುವ ಎಸ್‌ಬಿಐ ಕಚೇರಿ ಮುಂಭಾಗ ಗೂಡ್ಸ್ ಆಟೋಗಳ ನಿಲುಗಡೆಗೆ ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿದ್ದಾರೆ.

ಬಿಎಂ ರಸ್ತೆಯಲ್ಲಿರುವ ಎಸ್‌ಬಿಐ ಬ್ಯಾಂಕ್ ಮುಂಭಾಗ ಹೆದ್ದಾರಿಗೆ ಹೊಂದಿಕೊಂಡಂತೆ ಇರುವ ಜಾಗದಲ್ಲಿ ಗೂಡ್ಸ್ ವಾಹನಗಳನ್ನು ನಿಲುಗಡೆ ಮಾಡಲಾಗುತ್ತಿದ್ದು ಅದರಿಂದ ಸಾರ್ವಜನಿಕರು ತಮ್ಮ ವಾಹನಗಳನ್ನು ನಿಲುಗಡೆ ಮಾಡಲು ಜಾಗವಿಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಪಟ್ಟಣದ ಮುಖ್ಯ ರಸ್ತೆಯಲ್ಲಿರುವ ಎಸ್‌ಬಿಐ ಸಮೀಪ ಹಲವಾರು ಬ್ಯಾಂಕ್, ಅಂಗಡಿ ಹಾಗೂ ಸರ್ಕಾರಿ ಕಚೇರಿಗಳಿದ್ದು ದಿನನಿತ್ಯ ಸಾವಿರಾರು ಜನರು ವಾಹನಗಳಲ್ಲಿ ಬರುತ್ತಾರೆ. ಹೀಗೆ ಬರುವವರು ಎಸ್‌ಬಿಐ ಬ್ಯಾಂಕ್ ಮುಂಭಾಗ ವಾಹನ



ನಿಲುಗಡೆ ಮಾಡುತ್ತಿದ್ದರು. ಆದರೆ ಕಳೆದ ಕೆಲವು ದಿನಗಳಿಂದ ಈ ಜಾಗದಲ್ಲಿ ಗೂಡ್ಸ್ ಆಟೋಗಳನ್ನು ನಿಲುಗಡೆ ಮಾಡಲಾಗುತ್ತಿರುವುದರಿಂದ ಇತರರಿಗೆ ತೊಂದರೆಯಾಗುತ್ತಿದೆ. ಗೂಡ್ಸ್ ವಾಹನಗಳಿಗೆ ಪ್ರತ್ಯೇಕ ವ್ಯವಸ್ಥೆ ಮಾಡಿಕೊಡಬೇಕೆಂದು ಹಲಸುಲಿಗೆ ಮಂಜುನಾಥ್ ಆಗ್ರಹಿಸಿದ್ದಾರೆ.

# ರೈತರ ಒಕ್ಕಲೆಬ್ಬಿಸಲು ಬೀಡುವುದಿಲ್ಲ ಶಾಸಕ ಸುರೇಶ್ ಭರವಸೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ತಾಲ್ಲೂಕಿನ ಅಡವಿಬಂಟೇನಹಳ್ಳಿ, ಗಂಗೂರು ಮತ್ತು ಉಂಡಿಗನಾಳು ಗ್ರಾಮದ ವ್ಯಾಪ್ತಿಯಲ್ಲಿರುವ ಬಹುತೇಕ ಗ್ರಾಮದ ರೈತರನ್ನು ಅರಣ್ಯ ಇಲಾಖೆ ಒಕ್ಕಲೆಬ್ಬಿಸಲು ಮುಂದಾಗಿರುವ ಕ್ರಮ ಖಂಡನೀಯ. ಯಾವ ಕಾರಣಕ್ಕೂ ರೈತರನ್ನು ಒಕ್ಕಲೆಬ್ಬಿಸಲು ಬೀಡುವುದಿಲ್ಲ ಎಂದು ಶಾಸಕ ಹೆಚ್.ಕೆ. ಸುರೇಶ್ ಭರವಸೆ ನೀಡಿದರು.

ತಾಲ್ಲೂಕಿನ ಹಗರೆ ಸಮೀಪದ ಅಡವಿಬಂಟೇನಹಳ್ಳಿ ಗ್ರಾಮದಲ್ಲಿ ನಡೆದ ರೈತರು ಮತ್ತು ಅರಣ್ಯ ಇಲಾಖೆ ಸಭೆಯಲ್ಲಿ ಮಾತನಾಡಿ, ಅಡವಿಬಂಟೇನಹಳ್ಳಿ, ತಟ್ಟೆಹಳ್ಳಿ, ಕ್ಯಾತನಕೆರೆ, ಶಿವಪುರ, ಕೊಮ್ಮರನಹಳ್ಳಿ, ಭೂತನಗುಡಿ, ಐದಳ್ಳ ಕಾವಲ್, ಗಂಗೂರು, ಮಲಯಪ್ಪನಕೊಪ್ಪಲು, ಸಾಣೇನಹಳ್ಳಿ, ಸೀಗೆಗುಡ್ಡ ಕಾವಲು, ಉಂಡಿಗನಾಳು ಗ್ರಾಮದ ತನಕ ಸುಮಾರು 50ಕ್ಕೂ ಹೆಚ್ಚು ಗ್ರಾಮದ ಭೂ ರೈತರು ಕಳೆದ ನಾಲ್ಕು ದಶಕದಿಂದ ಉಳುಮೆ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಅಂತವರಿಗೆ ಸಿಡಿಲು ಬಡಿದಂತೆ ಅರಣ್ಯ ಇಲಾಖೆ ಈ ಭೂಮಿಗೆ ನಮಗೆ ಸೇರಿದೆ ಎಂದು ದಬ್ಬಾಳಿಕೆ ಮಾಡುತ್ತಾ ಅವರನ್ನು ಒಕ್ಕಲೆಬ್ಬಿಸುವ ಹುನ್ನಾರಕ್ಕೆ ಮುಂದಾಗಿರುವುದು ನಿಜಕ್ಕೂ ಖಂಡನೀಯವಾಗಿದೆ. ಬಹುತೇಕ ರೈತರು ಈಗಾಗಲೇ ಈ ಭೂಮಿಯನ್ನು ನಂಬಿಕೊಡು ಬಗರ್ ಹುಕುಂ ಸಾಗುವಳಿ ಚೀಟಿ ಪಡೆಯಲು ಅರ್ಜಿ ಸಲ್ಲಿಸಿದ್ದಾರೆ. ಇನ್ನು ಕೆಲ ರೈತರಿಗೆ ಪಹಣಿ ಬಂದಿದ್ದು, ಬ್ಯಾಂಕ್ ಸಾಲ ಸೌಲಭ್ಯಗಳನ್ನು ಪಡೆದಿದ್ದಾರೆ.

ಕೆಲವರು ಮನೆಗಳನ್ನು ಕಟ್ಟಿಕೊಂಡು ಬದುಕು ಸಾಗಿಸುವ ಬಡ ರೈತರ ಮೇಲೆ ಸರ್ಕಾರ ಇಂತಹ ಕ್ರಮಕ್ಕೆ ಮುಂದಾಗಿದ್ದಾರೆ. ರೈತರು ಯಾವ ಕಾರಣಕ್ಕೂ ಒಂದಿಚು ಭೂಮಿ ಬಿಡಬಾರದು. ನಿಮ್ಮೊಂದಿಗೆ ನಾನು ಸದಾ ಇರುತ್ತೇನೆ. ಅಗತ್ಯಬಿದ್ದರೆ ವಿಧಾನಸಭೆ ಅಧಿವೇಶನದಲ್ಲೂ ಹೋರಾಡುತ್ತೇನೆಂದರು.

ಗ್ರಾಮದ ಮರಿಗೌಡ, ಜಯಣ್ಣ, ಸಿದ್ದಮಲ್ಲಪ್ಪ, ದೊಡ್ಡೇಗೌಡ, ಪ್ರವೀಣ್, ಡಿಶಾಂತ್ ಕುಮಾರ್, ಶೇಖರೇಗೌಡ, ಪುಟ್ಟಣ್ಣ ಹಾಗೂ ಅರಣ್ಯಾಧಿಕಾರಿ ಏಡುಕುಂಡಲ, ಡಿಸಿಎಫ್ ಸೌರಭ್ ಕುಮಾರ್, ಯತೀಶ್ ಇತರರಿದ್ದರು.

# ಆದಾಯಕ್ಕಿಂತ ಅಧಿಕ ಆಸ್ತಿ: ಎಫ್‌ಡಿಎ ಮನೆ ಮೇಲೆ ಲೋಕಾ ದಾಳಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಆದಾಯಕ್ಕಿಂತ ಅಧಿಕ ಆಸ್ತಿ ಗಳಿಕೆ ಆರೋಪದ ಹಿನ್ನಲೆಯಲ್ಲಿ ಹಾಸನ ಸೇರಿ ರಾಜ್ಯದ ವಿವಿಧೆಡೆ ಲೋಕಾಯುಕ್ತ ಪೊಲೀಸರು ಏಕಕಾಲಕ್ಕೆ ದಾಳಿ ನಡೆಸಿದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿಯ ಪ್ರಥಮ ದರ್ಜೆ ಸಹಾಯಕಿ ಜ್ಯೋತಿ ಮೇರಿ ಅವರ ಮನೆ, ಕಚೇರಿ ಹಾಗೂ ಚನ್ನರಾಯಪಟ್ಟಣದಲ್ಲಿರುವ ಅವರ ಸಹೋದರಿಯ ತೋಟದ ಮನೆ ಮೇಲೆ ದಾಳಿ ನಡೆದಿದೆ.

ಇಬ್ಬರು ಲೋಕಾಯುಕ್ತ ಡಿವೈಎಸ್‌ಪಿ, ಇಬ್ಬರು ಇನ್ಸಪೆಕ್ಟರ್ ಹಾಗೂ ಸಿಬ್ಬಂದಿ ದಾಳಿ ನಡೆಸಿದ್ದಾರೆ.




ಬೆಳಿಗ್ಗೆ 6 ಗಂಟೆಗೆ ಆರಂಭವಾದ ತಪಾಸಣೆ ಪ್ರಕ್ರಿಯೆ ತಡರಾತ್ರಿ ವರೆಗೆ ನಡೆಯಿತು.

ಡಿಹೆಚ್ಒ ಕಚೇರಿ ಪ್ರಥಮ ದರ್ಜೆ ಸಹಾಯಕಿ ಮನೆ ಮೇಲೆ ಸ್ಥಳೀಯ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿ ಪರಿಶೀಲನೆ ನಡೆಸಿತು. ಸತ್ಯಮಂಗಲದಲ್ಲಿರುವ ಎಫ್‌ಡಿಎ ಜ್ಯೋತಿ ಮೇರಿ ಎಂಬುವರ ಮನೆಗೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ, ಅವರು ಕರ್ತವ್ಯ ನಿರ್ವಹಿಸುವ ಡಿಹೆಚ್ಒ ಕಚೇರಿಯಲ್ಲೂ ಪರಿಶೀಲನೆ ನಡೆಸಿತು. ಡಿಎಚ್ಒ ಆಫೀಸ್‌ನಲ್ಲಿ ಎಫ್‌ಡಿಎ ಆಗಿ ಕೆಲಸ ಮಾಡುತ್ತಿರುವ ಜ್ಯೋತಿ ಮೇರಿ, ಆದಾಯಕ್ಕಿಂತಲೂ ಹೆಚ್ಚಿನ ಆಸ್ತಿ ಹೊಂದಿದ್ದಾರೆ ಎಂಬ ಆರೋಪ ಕೇಳಿ ಬಂದಿತ್ತು.

ಈ ಹಿನ್ನಲೆ ಲೋಕಾ ದಾಳಿ ನಡೆದಿದ್ದು, ಕೆಲ ಮಹತ್ವದ ದಾಖಲೆ ವಶಕ್ಕೆ ತೆಗೆದುಕೊಂಡಿದ್ದು, ವಿಚಾರಣೆ ಮುಂದುವರಿದಿದೆ.

# ಇತಿಹಾಸದಲ್ಲಿ ಈ ದಿನ

## ಅಕ್ಟೋಬರ್-16

1905: ಬಂಗಾಳವನ್ನು ಬ್ರಿಟಿಷರು ವಿಭಜಿಸಿದರು. ಈ ಘಟನೆ ಭಾರತದಲ್ಲಿ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ಜ್ವಾಲೆ ನೀಡಿತು.

1923: ವಾಲ್ಟ್ ಡಿಸ್ನಿ ಕಂಪನಿಯು ಸ್ಥಾಪನೆಯಾಯಿತು. ಜಗತ್ತಿನ ಅತ್ಯಂತ ಜನಪ್ರಿಯ ಮನರಂಜನಾ ಸಂಸ್ಥೆ ಇದೇ ದಿನ ಹುಟ್ಟಿಕೊಂಡಿತು.

1945: ಆಹಾರ ಮತ್ತು ಕೃಷಿ ಸಂಸ್ಥೆ ಅಧಿಕೃತವಾಗಿ ಸ್ಥಾಪನೆಗೊಂಡಿತು. ಇದೇ ಕಾರಣಕ್ಕೆ ಅಕ್ಟೋಬರ್ 16 ಅನ್ನು ವಿಶ್ವ ಆಹಾರ ದಿನವಾಗಿ ಆಚರಿಸಲಾಗುತ್ತದೆ.

1964: ಚೀನಾ ತನ್ನ ಮೊದಲ ಪರಮಾಣು ಪರೀಕ್ಷೆ ನಡೆಸಿತು ಮತ್ತು ಅಣ್ವಸ್ತ್ರ ಹೊಂದಿದ ರಾಷ್ಟ್ರಗಳ ಸಾಲಿಗೆ ಸೇರ್ಪಡೆಯಾಯಿತು.

1978: ಪೋಲ್ಯಾಂಡ್‌ನ ಕಾರ್ಡಿನಲ್ ಕಾರೆಲ್ ವೋಜ್ಟಿಲಾ ಪೋಪ್ ಆಗಿ ಆಯ್ಕೆಯಾಗಿ, ಪೋಪ್ ಜಾನ್ ಪಾಲ್ ಎಂದು ಹೆಸರಿಸಲ್ಪಟ್ಟರು.

### ಜನನ

1854: ಆಸ್ಕರ್ ವೈಲ್ಡ್ ಐರಿಷ್ ನಾಟಕಕಾರ ಹಾಗೂ ಕವಿ

1931: ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಸಹಚರ ವಿಜ್ಞಾನಿ ಹಾಗೂ ಭಾರತೀಯ ವಿಜ್ಞಾನ ಕ್ಷೇತ್ರದ ಪ್ರಮುಖ ವ್ಯಕ್ತಿ ಡಾ. ಕಸ್ತೂರಿ ರಂಗನ್

1940: ಟಿಮ್ ಮೆಕ್‌ಕಾರ್ವರ್, ಅಮೆರಿಕನ್ ಬೇಸ್‌ಬಾಲ್ ಆಟಗಾರ ಮತ್ತು ಪ್ರಸಾರಕರಾಗಿ ಪ್ರಸಿದ್ಧ

# ಗುರು ಸೇವೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಗ್ರಾಮೀಣ ಭಾಗದ ಮಕ್ಕಳನ್ನು ವಿದ್ಯಾವಂತರನ್ನಾಗಿಸುವಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾಗಿರುತ್ತದೆ. ಗುರುವಿನ ಸೇವೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದು ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿ ಉದಯ್ ಕುಮಾರ್ ಹೇಳಿದರು.

ಪಟ್ಟಣದ ವಿದ್ಯಾ ವಿಕಾಸ ಶಾಲೆಯಲ್ಲಿ ರೋಟರಿ ಕ್ಲಬ್‌ನಿಂದ ಆಯೋಜಿಸಿದ್ದ ನಿವೃತ್ತ ಶಿಕ್ಷಕರಿಗೆ ಅಭಿನಂದನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳನ್ನು ಅವರ ಆಸಕ್ತಿಗೆ ತಕ್ಕಂತೆ ತಿದ್ದಿ, ಶಿಕ್ಷಣ, ಶಿಸ್ತು ಕಲಿಸುವುದು ಶಿಕ್ಷಕರ ಜವಾಬ್ದಾರಿ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಶಿಕ್ಷಕರು ಜವಾಬ್ದಾರಿ ಅರಿತು ಕಾರ್ಯ ನಿರ್ವಹಿಸಬೇಕು. ಶಿಕ್ಷಕ ವೃತ್ತಿ ಬಹಳ ಮಹತ್ವವಾದದ್ದು. ಸರ್ಕಾರಿ ಸೇವೆಯಲ್ಲಿ 35 ವರ್ಷ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗುತ್ತಿರುವುದು ಸುಲಭದ ವಿಷಯವಲ್ಲ. ನಾವು ನಿವೃತ್ತರಾದರೂ ನಮ್ಮ ಸುತ್ತಲಿನ ಮಕ್ಕಳು ವ್ಯಾಸಂಗ ಮಾಡುವಂತೆ ಪ್ರೇರೇಪಿಸಬೇಕು. ಮುಂದೆಯೂ ಮಕ್ಕಳಿಗೆ ಮಾರ್ಗದರ್ಶನ ಮಾಡಬೇಕು ಎಂದು ಸಲಹೆ ನೀಡಿದರು.




ರೋಟರಿ ಕ್ಲಬ್ ಅಧ್ಯಕ್ಷ ಬಿ.ಎ. ರಂಗನಾಥ್ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಸಂಸ್ಥೆಯಿಂದ 35ಕ್ಕೂ ಹೆಚ್ಚು ನಿವೃತ್ತ ಶಿಕ್ಷಕರನ್ನು ಗೌರವಿಸಿದ್ದೇವೆ. ಶಿಕ್ಷಕರು ತ್ಯಾಗ ಮತ್ತು ಸಮರ್ಪಣಾ ಮನೋಭಾವದಿಂದಲೇ ಶಿಷ್ಯರ ಸ್ಮೃತಿ ಪಟಲದಲ್ಲಿ ಉಳಿಯುತ್ತಾರೆ. ಜಗತ್ತಿನ ಶ್ರೇಷ್ಠ ವ್ಯಕ್ತಿಗಳ ನಿರ್ಮಾಣ ಶಿಕ್ಷಕರಿಂದ ಮಾತ್ರ ಸಾಧ್ಯ. ವಿದ್ಯಾರ್ಥಿಗಳ ಜವಾಬ್ದಾರಿಯ ಬಗ್ಗೆ ಕಲಿಸಿ ಅವರ ಭವಿಷ್ಯ ಹಸನಾಗಿಸುವ ಶಿಲ್ಪಿಗಳೇ ಶಿಕ್ಷಕರು ಎಂದರು. ರೋಟರಿ ಕ್ಲಬ್ ಕಾರ್ಯದರ್ಶಿ ಹೆಚ್.ಕೆ.ರಮೇಶ್, ಮಾಜಿ ಅಧ್ಯಕ್ಷ ಶಂಭುಗೌಡ, ಹಿರಿಯ ಸದಸ್ಯರಾದ ಬಿ.ಎಲ್. ರಾಜೇಗೌಡ, ಮೂಗಪ್ಪಗೌಡ, ವಿನೋದ್‌ಗೌಡ, ಸದಸ್ಯರಾದ ಗಣೇಶ್, ಸಂದೇಶ್, ಪುಟ್ಟ, ಯೋಗೇಶ್ ಗೌಡ, ಬಿ.ಬಿ. ಶಿವರಾಜು ಇದ್ದರು.

# ಅ.19 ರಂದು ಶ್ವಾನ ಪ್ರದರ್ಶನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹಾಸನಾಂಬ ಹಾಗೂ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ಅ.19ರಂದು ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ ಜಿಲ್ಲಾ ಮಟ್ಟದ ಶ್ವಾನ ಪ್ರದರ್ಶನ ಆಯೋಜಿಸಲಾಗಿದೆ.

ಎರಡು ತಿಂಗಳ ವಯಸ್ಸಿನ ಮೇಲ್ಪಟ್ಟ ಯಾವುದೇ ತಳಿಯ ಶ್ವಾನಗಳು ಭಾಗವಹಿಸಬಹುದಾಗಿದೆ. ಶ್ವಾನ ಪ್ರದರ್ಶನದಲ್ಲಿ ಭಾಗವಹಿಸಲು ನೊಂದಣಿ ಕಡ್ಡಾಯವಾಗಿದ್ದು, ಮಾಲೀಕರು ಹತ್ತಿರದ ಪಶುಚಿಕಿತ್ಸಾಲಯ ಪಶು ಆಸ್ಪತ್ರೆಗಳಿಗೆ ಭೇಟಿ ನೀಡಿ ಇಲ್ಲವೇ ಡಾ. ಕರುಣಾಕರ್ (ಮೊ: 8970181196), ಡಾ. ಜನಾರ್ಧನ್ (ಮೊ:7259378441), ಡಾ. ದರ್ಶನ್ (ಮೊ: 8792794935) ಇಲ್ಲಿಗೆ ಸಂಪರ್ಕಿಸಬಹುದು.

ಅ.18 ರ ಸಂಜೆ 5 ಗಂಟೆ ಒಳಗೆ ನೊಂದಣಿ ಮಾಡಿಸಿಕೊಳ್ಳಲು ಕೋರಿದೆ. ಪ್ರದರ್ಶನ ನಡೆಯುವ ಸ್ಥಳದಲ್ಲಿ ನೋಂದಣಿಗೆ ಅವಕಾಶವಿಲ್ಲ. ಜಿಲ್ಲೆಯ ನಿವಾಸಿಗಳಿಗೆ ನೋಂದಣಿಯನ್ನು ಸೀಮಿತಗೊಳಿಸಿದೆ. ಎಲ್ಲಾ ತಳಿಯ ಉತ್ತಮ ಶ್ವಾನಗಳಿಗೆ ಹಾಗೂ ಶ್ವಾನ ಮರಿಗಳಿಗೆ ಬಹುಮಾನಗಳನ್ನು ಸಹ ವಿತರಿಸಲಾಗುವುದು. ಶ್ವಾನಗಳ ಮಾಲೀಕರು ತಮ್ಮ ವಿವಿಧ ತಳಿಯ ಶ್ವಾನಗಳೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಶ್ವಾನಗಳನ್ನು ಪ್ರದರ್ಶಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರು ಕೋರಿದ್ದಾರೆ.

# ಇಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಹಾಸನ: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ವತಿಯಿಂದ ಅ.16 ರಂದು ಬೇಲೂರು ತಾಲ್ಲೂಕಿನ ಹಳೇಬೀಡು ಮತ್ತು ಗಂಗೂರು ವಿ.ವಿ. ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸಗಳನ್ನು ಹಮ್ಮಿಕೊಂಡಿರುವುದರಿಂದ, ಸದರಿ ದಿನಾಂಕದಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆ ವವರೆಗೆ ಹಳೇಬೀಡು ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಹಳೇಬೀಡು, ಅಡಗೂರು, ಗೋಣಿಸೋಮನಹಳ್ಳಿ, ಕ್ಯಾತನಕೆರೆ, ಮತ್ತಿಘಟ್ಟ, ಕರಿಕಟ್ಟೆಹಳ್ಳಿ, ದ್ಯಾವಪ್ಪನಹಳ್ಳಿ, ಹರುಬೀಹಳ್ಳಿ, ಹುಲ್ಲೇನಹಳ್ಳಿ, ರಾಜನಸಿರಿಯೂರು, ವೀರದೇವನಹಳ್ಳಿ ಮತ್ತು ಚೀಲನಾಯಕನಹಳ್ಳಿ ಹಾಗೂ ಗಂಗೂರು ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಕನಕೇನಹಳ್ಳಿ, ಕೋಡಿಹಳ್ಳಿ, ಗಂಗೂರು, ಸಾಣೇನಹಳ್ಳಿ ಪ್ರದೇಶಗಳ ವಿದ್ಯುತ್ ಸ್ಥಾವರಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಕವಿಪ್ರನಿನಿ, ಹಾಸನ ಕಾರ್ಯಾಚರಣೆಗಳ ವಿಭಾಗದಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248